SRI DEVARAJ URS ACADEMY OF HIGHER EDUCATION & RESEARCH
SRI DEVARAJ URS MEDICAL COLLEGE
Tamaka, Kolar

SDUAHER

UNIVERSITY LIBRARY & LEARNING RESOURCE CENTRE

Online Newspaper Clipping Service
Dtd- Thursday, 15th, August- 2019

ಉದಯವಾಣಿ

Page No.03

# ಇಂದು ತುರ್ತು ವೈದ್ಯ ವಿಭಾಗ ಲೋಕಾರ್ಪಣೆ



**ಕೋಲಾರ ಹೊರವಲಯದ ದೇವರಾಜ ಅರಸು ಉನ್ನತ ಶಿಕ್ಷಣ ಹಾಗೂ ಸಂಶೋಧನಾ ಸಂಸ್ಥೆ ಆವರಣದಲ್ಲಿ ನೂತನ ಕಟ್ಟಡಗಳ ಲೋಕಾರ್ಪಣೆ ಸಂಬಂಧ ಕುಲಾಧಿಪತಿ ಡಾ.ಎಸ್.ಕುಮಾರ್ ಸುದ್ದಿಗೋಷ್ಠಿ ನಡೆಸಿದರು.**

**ಕೋಲಾರ:** ನಗರ ಹೊರವಲಯದ ದೇವರಾಜ ಅರಸು ಉನ್ನತ ಶಿಕ್ಷಣ ಹಾಗೂ ಸಂಶೋಧನಾ ಸಂಸ್ಥೆಯ ಆವರಣದಲ್ಲಿ ಆ.15ರಂದು ತುರ್ತು ವೈದ್ಯ ವಿಭಾಗ, ವಾಕ್ ಶ್ರವಣ ಹಾಗೂ ಅಡ್ವಾನ್ಸ್ ರೀಸರ್ಚ್ ಆ್ಯಂಡ್ ಎಕ್ಸಲೆನ್ಸ್ ವಿಭಾಗಗಳ ನೂತನ ಕಟ್ಟಡಗಳ ಲೋಕಾರ್ಪಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಸಂಸ್ಥೆಯ ಕುಲಾಧಿಪತಿ ಡಾ.ಎಸ್. ಕುಮಾರ್ ತಿಳಿಸಿದರು.

ಸಂಸ್ಥೆಯಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿಮಾತನಾಡಿದ ಅವರು, ಸಂಸ್ಥೆಯ ಅಧ್ಯಕ್ಷ ಆರ್.ಎಲ್.ಜಾಲಪ್ಪ ಅವರು, ಸ್ವಾತಂತ್ರೋತ್ಸವದಂದು ಏನಾದರೂ ಕೊಡುಗೆ ನೀಡಬೇಕು ಎಂಬ ಆಶಯದಂತೆ ಜಿಲ್ಲೆಯ ಜನರ ಅನುಕೂಲಕ್ಕಾಗಿ ಈ ವರ್ಷವೂ ವಿವಿಧ ವಿಭಾಗಗಳನ್ನು ಆರಂಭಿಸುತ್ತಿದ್ದಾರೆ ಎಂದು ತಿಳಿಸಿದರು.

ಸುತ್ತಮುತ್ತಲಿನ ಜಿಲ್ಲೆಯ ಬಡ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆ ಕಲ್ಪಿಸುವ ನಿಟ್ಟಿನಲ್ಲಿ ಯೋಜನೆಗಳನ್ನು ರೂಪಿಸಿಕೊಂಡಿದ್ದು, ಅದರಂತೆ ಅಗತ್ಯ ಸೌಕರ್ಯ ಕಲ್ಪಿಸಲು ಟ್ರಸ್ಟ್ ಸದಾ ಸಿದ್ಧವಿದೆ ಎಂದು ಹೇಳಿದರು.

ನೂತನ ಕಟ್ಟಡದ ಲೋಕಾರ್ಪಣೆ ಕಾರ್ಯಕ್ರಮ ಸಂಸ್ಥೆಯ ರಜತ ಮಹೋತ್ಸವ ಸಭಾಂಗಣದಲ್ಲಿ ನಡೆಯಲಿದ್ದು, ಕಾರ್ಯಕ್ರಮವನ್ನು ನಿಮ್ಹಾನ್ಸ್ ಸಂಸ್ಥೆಯ ನಿವೃತ್ತ ಉಪ ಕುಲಪತಿ ಡಾ.ಪಿ.ಸತೀಶ್‌ಚಂದ್ರ ಉದ್ಘಾಟಿಸುವರು. ಅಪೋಲೋ ಆಸ್ಪತ್ರೆಯ ತುರ್ತು ವೈದ್ಯ ವಿಭಾಗದ ಮುಖ್ಯಸ್ಥೆ ಡಾ.ಅರುಣ ಸಿ.ರಮೇಶ್ ನೂತನ ಕಟ್ಟಡಗಳನ್ನು ಉದ್ಘಾಟಿಸುತ್ತಾರೆ. ಸಂಸ್ಥೆಯ ಕುಲಾಧಿಪತಿ ಡಾ.ಎಸ್.ಕುಮಾರ್, ಕಾರ್ಯದರ್ಶಿ ಜಿ.ಎಚ್.ನಾಗರಾಜ್, ಕಾರ್ಯದರ್ಶಿ ಜೆ.ರಾಜೇಂದ್ರ ಅತಿಥಿಗಳಾಗಿ ಭಾಗವಹಿಸುತ್ತಾರೆ ಎಂದು ವಿವರಿಸಿದರು.

**10 ಕೋಟಿ ರೂ. ನೆರವು:** ಸಂಸ್ಥೆಯ ಕಾರ್ಯದರ್ಶಿ ಜಿ.ಎಚ್.ನಾಗರಾಜ್ ಮಾತನಾಡಿ, ಸಂಸ್ಥೆಯೂ ಕೇವಲ ಆರೋಗ್ಯ, ಶಿಕ್ಷಣ ಸೇವೆಯಲ್ಲದೆ ನೆರೆ ಸಂತ್ರಸ್ತರಿಗೆ ನೆರವು ನೀಡುವ ಮತ್ತು ಸಾಮಾಜಿಕ ಹೊಣೆಗಾರಿಕೆ ಕಾರ್ಯಕ್ರಮಗಳನ್ನು ನಡೆಸಿಕೊಂಡು ಬರಲಾಗುತ್ತದೆ. ಹಿಂದೆ ಕೇರಳ ಹಾಗೂ ಕೊಡಗು ನೆರೆ ಸಂತ್ರಸ್ತರಿಗೆ 10 ಕೋಟಿ ರೂ. ನೆರವು ನೀಡಲಾಗಿದೆ ಎಂದರು.

ಇತ್ತೀಚೆಗೆ ಉತ್ತರ ಕರ್ನಾಟಕ ಭಾಗದಲ್ಲಿ ಸಂಭವಿಸಿರುವ ಪ್ರವಾಹಕ್ಕೆ ಸಿಲುಕಿರುವ ಸಂತ್ರಸ್ತರಿಗೆ ಸಂಸ್ಥೆಯ ಎಲ್ಲಾ ಸಿಬ್ಬಂದಿ, ಅಧಿಕಾರಿಗಳ ಒಂದು ದಿನದ 10 ಲಕ್ಷ ರೂ. ವೇತನದ ಜೊತೆಗೆ ಸಂಸ್ಥೆಯಿಂದ 1 ಕೋಟಿ ರೂ. ನೆರವು ನೀಡಲಾಗುತ್ತಿದೆ. ಜತೆಗೆ ವೈದ್ಯರ ತಂಡ ಅಗತ್ಯ ಸಾಮಗ್ರಿಗಳನ್ನು ಕಳುಹಿಸುವ ಪ್ರಯತ್ನ ಮಾಡುತ್ತಿದೆ ಎಂದು ಹೇಳಿದರು.